85



**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ ಇವರು ನಿಯಮ72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ: 94ಕ್ಕೆ ಉತ್ತರ**

**ಪ್ರಸ್ತಾಪಿಸಿರುವವಿಷಯ:**

"ದಿನಾಂಕ: 01.04.2006ರ ನಂತರ ನೇಮಕಗೊಂಡಿರುವ ಸರ್ಕಾರಿ ನೌಕರರಿಗೆ ಹೊಸ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ಹಳೇ ಪಿಂಚಣಿ ಯೋಜನೆಯನ್ನು ಮುಂದುವರೆಸುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯಬಯಸುತ್ತೇನೆ".

**ಉತ್ತರ:**

ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/89/2023, ದಿನಾಂಕ: 01.03.2023ರಲ್ಲಿ ರಾಜ್ಯದಲ್ಲಿ ಜಾರಿ ಇರುವ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ರದ್ದು ಪಡಿಸುವ ಸಂಬಂಧ ಈಗಾಗಲೇ ಹಳೆ ಪಿಂಚಣಿ ಯೋಜನೆಯನ್ನು ಮರು ಜಾರಿ ಮಾಡಿರುವ ರಾಜ್ಯಗಳಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಕುರಿತು ಕೈಗೊಂಡಿರುವ ಕ್ರಮಗಳ ಬಗ್ಗೆ ಅಧ್ಯಯನ ನಡೆಸಿ ವರದಿ ಸಲ್ಲಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಆದೇಶಿಸಿದೆ.

**ಸಂಖ್ಯೆ: ಆಇ-ಪಿಇಎನ್/371 /2023**

(ಸಿದ್ದರಾಮಯ್ಯ)
ಮುಖ್ಯಮಂತ್ರಿ